# ಪತ್ರಿಕಾ ಪ್ರಕಟಣೆ

ಕೊಡಗು ಜಿಲ್ಲೆಯಲ್ಲಿ ದಿನಾಂಕ 16-8-2018 ರಿಂದ ಸುರಿದ ಭಾರೀ ಮಳೆಯಿಂದ ಪ್ರಕೃತಿ ವಿಕೋಪ ಉಂಟಾಗಿ ಅಪಾರ ಪ್ರಮಾಣದ ಆಸ್ತಿ ಪಾಸ್ತಿ ನಷ್ಟವುಂಟಾಗಿ ಸಾವು ನೋವು ಸಂಭವಿಸಿರುತ್ತದೆ.

ಈ ದುರಂತ ಸಂಭವಿಸಿದ ಸ್ಥಳಗಳಿಂದ ತುರ್ತಾಗಿ ರಕ್ಷಣಾ ಕಾರ್ಯವನ್ನು ನಡೆಸಿ ಸಂಕಷ್ಟಕ್ಕೆ ಸಿಲುಕಿದ ಜನರನ್ನು ಈಗಾಗಲೇ ರಕ್ಷಿಸಲಾಗಿದ್ದು ಹೆಚ್ಚಿನ ರಕ್ಷಣಾ ಕಾರ್ಯಚರಣೆ ನಡೆಸುವ ಸಂಬಂಧ ತುರ್ತಾಗಿ ರಾಜ್ಯದ ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲೆಗಳಿಂದ 3 ಡ್ರೋಣ್ ಕ್ಯಾಮರಾಗಳನ್ನು ತರಿಸಿ ಕಾರ್ಯಾಚರಣೆಯನ್ನು ಪ್ರಾರಂಭಿಸುವ ವೇಳೆ ಹವಮಾನ ವೈಪರಿತ್ಯದ ಹಿನ್ನೆಲೆಯಲ್ಲಿ ಈ ದಿನ ಕಾರ್ಯಾಚರಣೆಯನ್ನು ನಡೆಸಲು ಸಾಧ್ಯವಾಗಿರುವುದಿಲ್ಲ. ದಿನಾಂಕ 22-8-2018 ರಿಂದ ರಕ್ಷಣಾ ಕಾರ್ಯಾಚರಣೆಯನ್ನು ನಡೆಸಲಾಗುವುದು.

ಪ್ರಕೃತಿ ವಿಕೋಪ ಸಂಭವಿಸಿದ ಸ್ಥಳಗಳಿಂದ ಜನರು ತಮ್ಮ ಮನೆ ಮತ್ತು ಆಸ್ತಿಪಾಸ್ತಿಗಳನ್ನು ತೊರೆದು ಬೇರೆ ಕಡೆಗಳಲ್ಲಿ ವಾಸ್ತವ್ಯ ಹೂಡಿದ್ದು ಇದೇ ಸಂದರ್ಭವನ್ನು ಬಳಸಿ ಕೆಲವು ಕಳ್ಳಕಾಕರು ಮನೆಗಳಿಂದ ಕಳ್ಳತನ ಮಾಡುತ್ತಿರುವ ಬಗ್ಗೆ ವದಂತಿಗಳು ಕೇಳಿಬಂದಿದ್ದು, ಇದುವರೆಗೆ ಈ ಸಂಬಂಧ ಜಿಲ್ಲೆಯ ಯಾವುದೇ ಪೊಲೀಸ್ ಠಾಣೆಗಳಿಗೆ ದೂರುಗಳು ಬಂದಿರುವುದಿಲ್ಲ.

ಜಿಲ್ಲೆಯಲ್ಲಿ ಯಾವುದೇ ಕಾನೂನು ಬಾಹಿರ ಚಟುವಟಿಕೆ ನಿಯಂತ್ರಿಸುವ ನಿಟ್ಟಿನಲ್ಲಿ ಹಾಲಿ ಇರುವ 9 ಪೊಲೀಸ್ ಚೆಕ್ ಪೋಸ್ಟ್ ಗಳಲ್ಲದೆ ಹೊಸದಾಗಿ 17 ಪೊಲೀಸ್ ಚೆಕ್ ಪೋಸ್ಟ್‌ಗಳನ್ನು ತೆರೆದು ಹಗಲು ಮತ್ತು ರಾತ್ರಿಪಾಳಿಯಲ್ಲಿ ಜಿಲ್ಲಾ ಮತ್ತು ಹೊರ ಜಿಲ್ಲೆಗಳಿಂದ ಹೆಚ್ಚಿನ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಬಳಸಿ ತಪಾಸಣಾ ಮತ್ತು ಗಸ್ತು ಕರ್ತವ್ಯವನ್ನು ಕಟ್ಟುನಿಟ್ಟಾಗಿ ನಡೆಸಲಾಗುತ್ತಿದೆ.

ಪ್ರಕೃತಿ ವಿಕೋಪಕ್ಕೆ ತುತ್ತಾದ ಪ್ರದೇಶಗಳಿಂದ ಕಳ್ಳತನ ಮಾಡುವುದಾಗಲೀ, ಪ್ರಯತ್ನಿಸುವುದಾಗಲೀ, ಕಾಣೆಯಾದವರ ಬಗ್ಗೆ ಅಥವಾ ಇನ್ನಿತರ ಮಾಹಿತಿ ಇದ್ದಲ್ಲಿ ಸಾರ್ವಜನಿಕರು ಸದರಿ ಮಾಹಿತಿಯನ್ನು ತಮ್ಮ ಹತ್ತಿರದ ಪೊಲೀಸ್ ಠಾಣೆಗಳಿಗೆ ಅಥವಾ ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ ದೂರವಾಣಿ ಸಂಖ್ಯೆ 100 ಅಥವಾ 08272 -228330ಕ್ಕೆ ತಿಳಿಸಲು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾದ ಡಾ: ಸುಮನ್ ಡಿ.ಪನ್ನೇಕರ್ ರವರು ಕೋರಿಕೊಂಡಿರುತ್ತಾರೆ.

ಸಾರ್ವಜನಿಕ ಸಂಪರ್ಕಾಧಿಕಾರಿ,
ಕೊಡಗು ಜಿಲ್ಲೆ.